# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 950

ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ.ಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 14.03.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತ್ ಗಳಲ್ಲಿ ಇ-ಖಾತಾ ನೀಡಲು ಇರುವ ನಿಯಮಗಳೇನು; (ಸುತ್ತೋಲೆಯನ್ನು ನೀಡುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ನಿಯಮ 28 ಮತ್ತು 30 ರಂತೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ನಿಗಧಿತ ನಮೂನೆ 9 ಹಾಗೂ 11 ಎ ಗಳನ್ನು ಹಾಗೂ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ಯನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸಲಾಗುತ್ತಿದೆ.<br><br>ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ.<br><br>ಸುತ್ತೋಲೆಗಳ ಪ್ರತಿಯನ್ನು ಅನುಬಂಧ-1 ರಲ್ಲಿ ನೀಡಿದೆ. |
| (ಆ) | ಹಲವು ಗ್ರಾಮ ಪಂಚಾಯತ್ ಗಳಲ್ಲಿ ನಿಗಧಿತ ಅವಧಿಯಲ್ಲಿ ಇ-ಖಾತಾ ನೀಡದೆ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸಕಾಲದಲ್ಲಿ ಇ-ಖಾತಾ ವಿತರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆಗಳನ್ನು ವಿತರಿಸುವುದು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ರ ಕಾರ್ಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಒದಗಿಸಿದಲ್ಲಿ ಸಕಾಲದಡಿ 45 ದಿನಗಳೊಳಗೆ ವಿತರಿಸಲಾಗುವುದು. |
| (ಇ) | ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನಲ್ಲಿ ಒಂದು ವರ್ಷದಿಂದ ಇ-ಖಾತಾ ವಿತರಿಸುವಂತೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಇಲ್ಲಿಯವರೆಗೆ ಎಷ್ಟು ಇ-ಖಾತಾ ವಿತರಿಸಲಾಗಿದೆ; ನಿಗಧಿತ ಅವಧಿ ಮೀರಿದರೂ ಇ-ಖಾತಾ ವಿತರಿಸದೆ ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು) | ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನಲ್ಲಿ ಒಂದು ವರ್ಷದಿಂದ ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆಗಳನ್ನು ವಿತರಿಸುವಂತೆ ಬಂದ ಅರ್ಜಿಗಳ ಸಂಖ್ಯೆ ಒಟ್ಟು 4630 ಆಗಿದ್ದು, ಅವುಗಳಲ್ಲಿ 4613 ಆಸ್ತಿಗಳಿಗೆ ನಮೂನೆಗಳನ್ನು ವಿತರಣೆ ಮಾಡಿದ್ದು, ಬಾಕಿ 17 ಆಸ್ತಿಗಳಿಗೆ ನಮೂನೆಗಳನ್ನು ವಿತರಣೆ ಮಾಡಬೇಕಾಗಿರುತ್ತದೆ.<br><br>ಗ್ರಾಮ ಪಂಚಾಯಿತಿವಾರು ವಿವರಗಳನ್ನು ಅನುಬಂಧ-2 ರಲ್ಲಿ ನೀಡಿದೆ. |

| | | |
|---|---|---|
| (ಈ) | ನಿಗಧಿತ ಅವಧಿಯಲ್ಲಿ ಇ-ಖಾತಾ ವಿತರಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ನಿಗಧಿತ ಅವಧಿಯಲ್ಲಿ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆಗಳನ್ನು ವಿತರಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.<br><br>1) ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು (ತೆರಿಗೆ ನಿರ್ಧರಣೆ ಪಟ್ಟಿ) ವಿತರಿಸಲು ಗ್ರಾಮ ಪಂಚಾಯತಿ ಸಭೆಯ ಅನುಮೋದನೆ ಅಗತ್ಯವಿದ್ದು, ಮೊದಲು ಬಂದ ಅರ್ಜಿಯನ್ನು ಸ್ವೀಕೃತಿ ದಿನಾಂಕದ ಆಧಾರದ ಮೇಲೆ ಮೊದಲು ಇತ್ಯರ್ಥಪಡಿಸಲು (First In First Out-FIFO) ಕ್ರಮ ವಹಿಸುವಂತೆ ಹಾಗೂ ಸಕಾರಣವಿಲ್ಲದೆ ಅರ್ಜಿಗಳನ್ನು ತಿರಸ್ಕರಿಸುವುದು ಮತ್ತು ವಿಲೇ ಇಡದಂತೆ ಗ್ರಾಮ ಪಂಚಾಯತಿಗಳಿಗೆ ಸೂಚಿಸಲಾಗಿದೆ.<br><br>2) ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸಲು ಅವಶ್ಯಕವಾಗಿರುವ ದಾಖಲೆಗಳ ಚೆಕ್‌ಲಿಸ್ಟ್‌ಗಳನ್ನು ಗ್ರಾಮ ಪಂಚಾಯತಿಗಳ ಸೂಚನಾ ಫಲಕಗಳಲ್ಲಿ ಕಡ್ಡಾಯವಾಗಿ ಅಳವಡಿಸುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದೆ.<br><br>3) ಇ-ಸ್ವತ್ತು ತಂತ್ರಾಂಶದಲ್ಲಿ ನಮೂನೆಗಳನ್ನು ವಿತರಿಸುವುದು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ, 2011 ರ ಕಾರ್ಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಒದಗಿಸಿದಲ್ಲಿ ಸಕಾಲದಡಿ 45 ದಿನಗಳೊಳಗೆ ವಿತರಿಸಲಾಗುವುದು.<br><br>4) ಸಕಾಲದಲ್ಲಿ ನಮೂನೆಗಳನ್ನು ವಿತರಣೆ ಮಾಡುವ ಬಗ್ಗೆ ತಾಲ್ಲೂಕು ಪಂಚಾಯತಿ, ಜಿಲ್ಲಾ ಪಂಚಾಯತಿ ಮತ್ತು ಇಲಾಖೆಯ ಅಧಿಕಾರಿಗಳಿಂದ ನಿರಂತರವಾಗಿ ಪರಿಶೀಲನೆ ಮಾಡಲಾಗುತ್ತಿರುತ್ತದೆ.<br><br>5) ಇ-ಸ್ವತ್ತು ದಾಖಲೆಗಳನ್ನು ಪಡೆಯಲು ಸಾರ್ವಜನಿಕರು ತಮ್ಮ ದಾಖಲೆಗಳನ್ನು ಇ-ಸ್ವತ್ತು ತಂತ್ರಾಂಶದಲ್ಲಿ ತಾವೇ ಇಂಡೀಕರಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. |

ಸಂಖ್ಯೆ: ಗ್ರಾಅಪ 211 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಅನುಬಂಧ - 1

**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013(ಭಾ-6)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 03-02-2014.

**ಸುತ್ತೋಲೆ**

**ವಿಷಯ:** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, ನಮೂನೆ 11ಎ ಮತ್ತು ನಮೂನೆ 11ಬಿ ಗಳನ್ನು ವಿತರಿಸುವಾಗ ಅನುಸರಿಸುವ ಕಾರ್ಯವಿಧಾನದ ಬಗ್ಗೆ.- ಪರಿಷ್ಕೃತ ಸೂಚನೆಗಳು.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 553 ಗ್ರಾಪಂಅ 2012, ದಿನಾಂಕ: 04-01-2013.
2. ಇದೇ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 31.10.2013.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾ-6), ದಿನಾಂಕ: 21.01.2014.

------

ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಆಸ್ತಿಗಳನ್ನು ರಾಜ್ಯದಲ್ಲಿನ ಎಲ್ಲಾ ಗ್ರಾಮ ಪಂಚಾಯತಿಗಳು ನಮೂನೆ 9 ಮತ್ತು ನಮೂನೆ 11 ನ್ನು ನೀಡುವ ಸಂಬಂಧ ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ವಿಧಾನವನ್ನು ಅನುಸರಿಸತಕ್ಕದ್ದೆಂದು ಸೂಚಿಸಲಾಗಿತ್ತು.

(ಅ) ಯಾವುದೇ ನಾಗರೀಕನು ತನ್ನ ಆಸ್ತಿಗಾಗಿ ನಮೂನೆ 9 ಅಥವಾ ನಮೂನೆ 11 ನ್ನು ಕೋರಿದಾಗ ಸದರಿ ಆಸ್ತಿಯು ಅಧಿಕೃತವಾದದ್ದೇ ಅಥವಾ ಅಲ್ಲವೇ ಎಂಬುದನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಪರಿಶೀಲಿಸುವುದು. ಈ ಕೆಳಗೆ ನಮೂದಿಸಿರುವ ಆಸ್ತಿಗಳು ಅಧಿಕೃತ ಆಸ್ತಿಗಳಾಗಿರುತ್ತವೆ.

(i) ಮೂಲ/ಹಳೆಯ ಗ್ರಾಮ ಠಾಣಾ ವ್ಯಾಪ್ತಿಯ ಒಳಗಿರುವ ಆಸ್ತಿ/ನಿವೇಶನ ಎಂದು ಲಗತ್ತಿಸಿದ ನಮೂನೆಯಲ್ಲಿ ತಹಶೀಲ್ದಾರರ/ಕಂದಾಯ ಪರಿವೀಕ್ಷಕರ ದೃಢೀಕರಣ ನೀಡಿದ ಆಸ್ತಿಗಳು. (ನಮೂನೆ ಲಗತ್ತಿಸಿದೆ)

(ii) ಬಸವ ವಸತಿ ಯೋಜನೆ, ಗ್ರಾಮೀಣ ಅಂಬೇಡ್ಕರ್ ಯೋಜನೆ ಮತ್ತು ಇಂದಿರಾ ಆವಾಸ್ ಯೋಜನೆ ಮನೆಗಳ ನಿರ್ಮಾಣಕ್ಕಾಗಿ ವಸತಿ ಇಲಾಖೆಯು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಎಚ್‌ಡಿ 55 ಹೆಚ್‌ಎಎಸ್ 2011 ದಿನಾಂಕ:30-01-2012 ರಂತೆ ಸೃಜಿಸುವ ಆಸ್ತಿ.

(iii) ಭೂ ಪರಿವರ್ತನೆಯಾದ ವ್ಯವಸಾಯದ ಜಮೀನಿನಲ್ಲಿ ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಯೋಜನಾ ಪ್ರಾಧಿಕಾರದಿಂದ ಬಡಾವಣೆ ನಕ್ಷೆ ಅನುಮೋದನೆಯೊಂದಿಗೆ ಸೃಜಿಸಲಾದ ಆಸ್ತಿ.

ಉಲ್ಲೇಖ (3) ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸೂಕ್ತ ತಿದ್ದುಪಡಿ ತಂದು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ಎರಡನೇ ತಿದ್ದುಪಡಿ) ನಿಯಮಗಳು, 2013 ನ್ನು ದಿನಾಂಕ: 21.01.2014 ರಂದು ಹೊರಡಿಸಲಾಗಿದೆ. ಕ್ರಮಬದ್ಧ ಆಸ್ತಿಗಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಗಳು ಈ ಹಿಂದೆ ವಿತರಿಸುತ್ತಿದ್ದ ನಮೂನೆ 11 ಕ್ಕೆ ಬದಲಾಗಿ ನಮೂನೆ 11ಎ ಎಂದು ನಮೂನೆಯನ್ನು ಪ್ರತಿಸ್ಥಾಪಿಸಲಾಗಿದೆ.

ಉಲ್ಲೇಖ (1) ಮತ್ತು ಉಲ್ಲೇಖ (2) ರಲ್ಲಿನ ಸರ್ಕಾರದ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ನು ಪುನರ್ ಪರಿಶೀಲಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಕೆಳಕಂಡ ಪರಿಷ್ಕೃತ ಸೂಚನೆಗಳನ್ನು ಹೊರಡಿಸಲಾಗಿದೆ.

ಮೇಲೆ ತಿಳಿಸಿರುವ ಹಿನ್ನೆಲೆಯಲ್ಲಿ ಇನ್ನು ಮುಂದೆ ಈ ಕೆಳಕಂಡ ಆಸ್ತಿಗಳಿಗೆ ಮಾತ್ರ **ನಮೂನೆ 9 ಹಾಗೂ ನಮೂನೆ 11ಎ** ಗಳನ್ನು ವಿತರಿಸತಕ್ಕದ್ದು.

ಅ) ದಿನಾಂಕ: 04.01.2013ರ ಸುತ್ತೋಲೆಯಲ್ಲಿ ಪಟ್ಟಿ ಮಾಡಿರುವ ಆಸ್ತಿಗಳ ಮಾಲಿಕರು ಸೂಕ್ತ ದಾಖಲೆಗಳನ್ನು ಒದಗಿಸಿದರೆ ನಮೂನೆ 9 ಹಾಗೂ 11ಎ ಅನ್ನು ವಿತರಿಸತಕ್ಕದ್ದು.

ಆ) ಸ್ಥಳೀಯ ಯೋಜನಾ ಪ್ರಾಧಿಕಾರದ **ಹೊರಗಡೆಯಿರುವ** ಪ್ರದೇಶವು ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ವ್ಯಾಪ್ತಿಗೆ ಒಳಪಡದಿರುವ ಕಾರಣ, **ಸ್ಥಳೀಯ ಯೋಜನಾ ಪ್ರಾಧಿಕಾರಗಳ ಹೊರಗಡೆ ಇರುವ ಪ್ರದೇಶಗಳಲ್ಲಿರುವ ಪ್ರಸ್ತುತ ಅಸ್ತಿತ್ವದಲ್ಲಿರುವ ಆಸ್ತಿಗಳಿಗೆ ಸಂಬಂಧಿಸಿದಂತೆ ಲೇಔಟ್ ಪ್ಲಾನ್‌ಗಳಿಗೆ ನಗರ ಯೋಜನಾ ನಿರ್ದೇಶನಾಲಯದ ಅನುಮೋದನೆಯ ದಾಖಲೆಯನ್ನು ಒದಗಿಸುವ ಅಗತ್ಯವಿಲ್ಲವೆಂದು ತೀರ್ಮಾನಿಸಲಾಗಿದೆ.**

ಇ) ಈ ಪ್ರದೇಶಗಳಲ್ಲಿ, ದಿನಾಂಕ: 14.06.2013 ರ ನಂತರ ಸೃಜಿಸಬಹುದಾದ ಹೊಸ ಲೇಔಟ್‌ಗಳಿಗೆ ಅನುಮೋದನೆ ನೀಡುವ ಅಧಿಕಾರವನ್ನು ತಾಲ್ಲೂಕು ಪಂಚಾಯತಿಗಳಿಗೆ ನೀಡಲು ತೀರ್ಮಾನಿಸಲಾಗಿದೆ. ಹೊಸ ಲೇ ಔಟ್ ಪ್ಲಾನ್‌ಗಳಿಗೆ ಅನುಮೋದನೆ ನೀಡಲು ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳು ಅನುಸರಿಸಬೇಕಾದ ವಿಧಿವಿಧಾನಗಳ ಬಗ್ಗೆ **ಪ್ರತ್ಯೇಕ ಮಾರ್ಗಸೂಚಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ನಿರ್ದೇಶಕರವರಿಂದ ಹೊರಡಿಸಲಾಗುವುದು.**

ಈ) ಆದರೆ ಸ್ಥಳೀಯ ಯೋಜನಾ ಪ್ರಾಧಿಕಾರಗಳ ಉದಾಹರಣೆಯಾಗಿ, ಬಿಡಿಎ, ಬಿಎಂಆರ್‌ಡಿಎ, ನೆಲಮಂಗಲ ಸ್ಥಳೀಯ ಯೋಜನಾ ಪ್ರಾಧಿಕಾರ, ಇತ್ಯಾದಿ, ಪ್ರದೇಶಗಳ **ಒಳಗಡೆಯಿರುವ** ಆಸ್ತಿಗಳಿಗೆ ಸಂಬಂಧಿಸಿದಂತೆ ದಿನಾಂಕ: 04.01.2013 ರ ಸುತ್ತೋಲೆಯಲ್ಲಿನ ಲೇಔಟ್ ಪ್ಲಾನ್ ದಾಖಲೆಯನ್ನು ಒದಗಿಸುವುದು ಕಡ್ಡಾಯವಾಗಿದೆ.

ಉ) ಭೂ ಪರಿವರ್ತನೆಯಾದ ವ್ಯವಸಾಯದ ಜಮೀನಿನಲ್ಲಿ ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಯೋಜನಾ ಪ್ರಾಧಿಕಾರಗಳು ಕೆಲವು ಪ್ರಕರಣಗಳಲ್ಲಿ Single Plot Approval ನಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ನೀಡಿವೆ. ಇಂತಹ ಪರವಾನಿಗೆ ಪಡೆದ ಆಸ್ತಿಗೂ ಸಹ ನಮೂನೆ 9 ಹಾಗೂ 11ಎ ನ್ನು ವಿತರಿಸತಕ್ಕದ್ದು.

ಗ್ರಾಮ ಪಂಚಾಯಿತಿಗಳು ಆಸ್ತಿಗಳಿಗೆ ಸಂಬಂಧಿಸಿದಂತೆ ವಿತರಿಸುವ ನಮೂನೆ 9 ಮತ್ತು 11ಎ ಗಳನ್ನು ದಿನಾಂಕ: 14.06.2013 ರ ಪೂರ್ವದಲ್ಲಿ ಅಸ್ತಿತ್ವದಲ್ಲಿದ್ದ ಆಸ್ತಿಗಳನ್ನು ಆಧರಿಸಿ ಉಪನೊಂದಾಣಾಧಿಕಾರಿಗಳ ಕಛೇರಿಯಲ್ಲಿ ನೋಂದಾಯಿಸಬಹುದು.

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ನಿಯಮ 30 ಕ್ಕೆ ಸೂಕ್ತ ತಿದ್ದುಪಡಿ ತಂದು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ಎರಡನೇ ತಿದ್ದುಪಡಿ) ನಿಯಮಗಳು, 2013 ನ್ನು ದಿನಾಂಕ: 21.01.2014 ರಂದು ಹೊರಡಿಸಲಾಗಿದೆ. ಈ ನಿಯಮಗಳನ್ವಯ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ನಮೂನೆ 11ಬಿ (ತೆರಿಗೆ ನಿರ್ಧರಣಾ ಪಟ್ಟಿ) ನಿರ್ವಹಿಸತಕ್ಕದ್ದಾಗಿದೆ.

ನಿರ್ದಿಷ್ಟಪಡಿಸುವ ಅಂತಿಮ ದಿನಾಂಕ ಅಂದರೆ 14.06.2013 ರೊಳಗೆ ಅಸ್ತಿತ್ವದಲ್ಲಿರುವ ಆಸ್ತಿಗಳ ಮಾಲೀಕರು ಸೂಕ್ತ ದಾಖಲೆಗಳನ್ನು ಒದಗಿಸದಿದ್ದರೆ ಇನ್ನು ಮುಂದೆ **ಕ್ರಮಬದ್ಧವಲ್ಲದ** ಈ ಕೆಳಕಂಡ ಆಸ್ತಿಗಳಿಗೆ ಮಾತ್ರ **ನಮೂನೆ 11ಬಿ ಗಳನ್ನು** ವಿತರಿಸತಕ್ಕದ್ದು.

ಅ. ಪಂಚತಂತ್ರ ತಂತ್ರಾಂಶದಲ್ಲಿ ದಾಖಲಾಗಿರುವ ದಿನಾಂಕ:14-06-2013 ರೊಳಗೆ ಅಸ್ತಿತ್ವದಲ್ಲಿರುವ ಆಸ್ತಿಗಳನ್ನು ಕ್ರಮಬದ್ಧವೆಂದು ಸಾಧಿಸಲು ಸೂಕ್ತ ದಾಖಲೆಗಳನ್ನು ಒದಗಿಸಲಾಗದಿರುವ ಪ್ರಕರಣಗಳು.

ಆ. ಎರಡು ಅಥವಾ ಮೂರು ಬಾರಿ ಮಾರಾಟ ಹಾಗೂ ಕ್ರಯಗಳಿಗೆ ಒಳಪಟ್ಟಿರುವ ಆದರೆ ಪಂಚತಂತ್ರ ತಂತ್ರಾಂಶದಲ್ಲಿ ನಿಗಧಿತ ದಿನಾಂಕದೊಳಗೆ ಅಂದರೆ 14.06.2013ರೊಳಗೆ ದಾಖಲಿಸದಿರುವ ಆಸ್ತಿಗಳಿಗೆ ಸಂಬಂಧಿಸಿದ ಪ್ರಕರಣಗಳು.

ಇ. ನಿಗಧಿತ ದಿನಾಂಕದೊಳಗೆ ಪಂಚತಂತ್ರದಲ್ಲಿ ದಾಖಲಿಸಲಾಗದ ಕಟ್ಟಡ (ನಿವೇಶನ ಹೊರತುಪಡಿಸಿ) ಹಾಗೂ ವ್ಯವಹಾರಗಳಿಗೆ ಒಳಪಡದ ಪ್ರಕರಣಗಳಲ್ಲಿ ಹಳೆಯ 6 ತಿಂಗಳ ಪೂರ್ವದ ಯಾವುದಾದರೂ ಒಂದು ತಿಂಗಳ ವಿದ್ಯುತ್‌ಚ್ಛಕ್ತಿ ಬಿಲ್ಲನ್ನು ಸಲ್ಲಿಸತಕ್ಕದ್ದು. ಒಂದು ವೇಳೆ ಹಳೆಯ ಬಿಲ್ಲು ಲಭ್ಯವಿಲ್ಲದಿದ್ದರೆ ಸಂಬಂಧಿಸಿದ ಎಸ್ಕಾಂ ಕಛೇರಿಗಳು ನೀಡುವ ಬಿಲ್ಲಿನ ದೃಢೀಕೃತ ಪಟ್ಟಿಯನ್ನು ಸಲ್ಲಿಸತಕ್ಕದ್ದು.

ಈ) "ಫಾರಂ ಬಿಲ್ಡಿಂಗ್/ಹೌಸ್" ಎಂದು ಪರಿಗಣಿಸುವ ಆಸ್ತಿಗಳಿಗೆ ಸಂಬಂಧಿಸಿದಂತೆ, ತಹಶೀಲ್ದಾರ್/ಕಂದಾಯ ಪರಿವೀಕ್ಷಕರವರಿಂದ ದೃಢೀಕೃತ ಪತ್ರವನ್ನು ಸಲ್ಲಿಸತಕ್ಕದ್ದು. ಇಂತಹ ಆಸ್ತಿಗಳಿಗೆ ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 95(1) ರನ್ವಯ ಕೃಷಿಯೇತರ ಪರಿವರ್ತನೆಯ ಪ್ರಕ್ರಿಯೆ ಅಗತ್ಯವಿರುವುದಿಲ್ಲ. ಇಂತಹ ಅವಕಾಶಗಳು ದುರಪಯೋಗವಾಗುವುದನ್ನು ತಪ್ಪಿಸಲು "ಫಾರಂ ಬಿಲ್ಡಿಂಗ್/ಹೌಸ್" ಆಸ್ತಿಗಳನ್ನು ಗುರುತಿಸಲು

ಅನುಸಾರವಾಗುವಂತೆ ಕಂದಾಯ ಇಲಾಖೆಯು ಪ್ರತ್ಯೇಕವಾಗಿ ಹೊರಡಿಸುವ ಮಾರ್ಗಸೂಚಿಗಳನ್ನು ಪಾಲಿಸಬೇಕು.

ಊ) ಕರ್ನಾಟಕ ಭೂ ಕಂದಾಯ ಅಧಿನಿಯಮದ ಪ್ರಕರಣ 95(2)ರನ್ವಯ **ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ**, ಕೃಷಿಯೇತರ ಪರಿವರ್ತನ ದೃಢೀಕರಣ ಪತ್ರಗಳ ಬದಲಾಗಿ ಆಸ್ತಿ ಮಾಲೀಕರು ತನ್ನ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಸಿಕೊಳ್ಳುವ ಸಂಬಂಧ ತಹಶೀಲ್ದಾರ್‌ರವರಿಗೆ ನೀಡಿದ್ದ ಮನವಿಯನ್ನಾಧರಿಸಿ ನೀಡುವ ಹಿಂಬರಹದ ಪ್ರತಿ ಅವಶ್ಯಕವಾಗಿರತಕ್ಕದ್ದು.

ಗ್ರಾಮ ಪಂಚಾಯಿತಿಗಳು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಸಂಬಂಧಿಸಿದಂತೆ ವಿತರಿಸುವ ನಮೂನೆ 11ಬಿ ನ್ನು ಆಧರಿಸಿ ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಾಯಿಸಬಹುದು.

ಆದುದರಿಂದ **ಎಲ್ಲಾ ಗ್ರಾಮ ಪಂಚಾಯಿತಿಗಳು ತಪ್ಪದೆ ತೆರಿಗೆ ನಿರ್ಧರಣೆ ಪಟ್ಟಿ ರಿಜಿಸ್ಟರ್ (ನಮೂನೆ-9) ಭೂಮಿ ಮತ್ತು ಕಟ್ಟಡದ ತೆರಿಗೆಗಳ ಬೇಡಿಕೆ ಮತ್ತು ವಸೂಲಿ ರಿಜಿಸ್ಟರ್ (ನಮೂನೆ-11ಎ ಮತ್ತು ನಮೂನೆ 11ಬಿ) ಗಳನ್ನು ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಿದೆ. ಸದರಿ ನಮೂನೆಗಳನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿಯ ಮೂಲಕ ಮಾತ್ರ ವಿತರಿಸತಕ್ಕದ್ದು.**

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಹಾಗೂ ಉಲ್ಲೇಖಿತ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಕಾರ್ಯದರ್ಶಿಗಳಿಗೆ ಮತ್ತೊಮ್ಮೆ ತಿಳಿಸಿದೆ.

(ಕೆ. ಯಾಲಕ್ಕಿಗೌಡ) 3/2/14
ನಿರ್ದೇಶಕರು (ಪಂ.ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

೧) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,

೨) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.

೩) ಎಲ್ಲಾ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿಗಳ ಮುಖಾಂತರ.

೪) ಸಂಪಾದಕರು ಕರ್ನಾಟಕ ವಿಕಾಸ ಪತ್ರಿಕೆ/ವೆಬ್ ಸೈಟ್, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.

೫) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿ ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.</u>

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಆಯುಕ್ತರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು.
4) ಮಹಾಪರಿವೀಕ್ಷಕರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಬೆಂಗಳೂರು.

# ನಮೂನೆ

ಸಂಖ್ಯೆ: ದಿನಾಂಕ:

ವಿಷಯ: __________ ಠಾಣಾ ವ್ಯಾಪ್ತಿಯೊಳಗಿನ ಆಸ್ತಿಗೆ ಸಂಬಂಧಿಸಿದ ಸ್ವತ್ತಿನ ಬಗ್ಗೆ.

ಉಲ್ಲೇಖ: ಶ್ರೀಮತಿ/ಶ್ರೀ __________ರವರ ಅರ್ಜಿ ಸಂಖ್ಯೆ________ ಮತ್ತು ಸಕಾಲ ಅರ್ಜಿ ಸ್ವೀಕೃತಿ ಸಂಖ್ಯೆ________

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀಮತಿ / ಶ್ರೀ __________ ಬಿನ್/ ಕೋಂ__________ಗ್ರಾಮ. __________ ತಾಲ್ಲೂಕು ಇವರ __________ ಗ್ರಾಮ ಪಂಚಾಯತಿ ವ್ಯಾಪ್ತಿಯ __________ ಗ್ರಾಮದಲ್ಲಿ ಇರುವ ಆಸ್ತಿಯು ಗ್ರಾಮ ಠಾಣಾ ವ್ಯಾಪ್ತಿಯೊಳಗೆ ಬರುತ್ತದೆ/ ಗ್ರಾಮ ಠಾಣಾ ವ್ಯಾಪ್ತಿಯೊಳಗೆ ಬರುವುದಿಲ್ಲ ಎಂದು ದೃಢೀಕರಿಸಿದೆ.

ತಹಶೀಲ್ದಾರ್/ಕಂದಾಯ ಪರಿವೀಕ್ಷಕರು,

__________ ತಾಲ್ಲೂಕು/ಹೋಬಳಿ

__________ ಜಿಲ್ಲೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿ

__________ ಗ್ರಾಮ ಪಂಚಾಯತಿ

__________ ತಾಲ್ಲೂಕು

**ಕರ್ನಾಟಕ ಸರ್ಕಾರ**

ನಂ.ಗ್ರಾಅಪ/04/ಗ್ರಾಪಂಕಾ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 25-02-2016

**ಸುತ್ತೋಲೆ**

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುವ ಬಗ್ಗೆ.

ಉಲ್ಲೇಖ:
5. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:14-06-2013.
6. ಸರ್ಕಾರದ ಸೇರ್ಪಡೆ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013, ದಿನಾಂಕ:15-06-2013.
7. ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:21-01-2014.
8. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 83 ಗ್ರಾಪಂಅ 2013,(ಭಾಗ-6) ದಿನಾಂಕ:03-02-2014.

---

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) (ತಿದ್ದುಪಡಿ) ನಿಯಮಗಳು, 2013 ರಲ್ಲಿ ನಿಯಮ 28 ಮತ್ತು 30 ಕ್ಕೆ ದಿನಾಂಕ:14-06-2013 ಮತ್ತು ದಿನಾಂಕ:15-06-2013 ರಲ್ಲಿ ತಿದ್ದುಪಡಿ ತರಲಾಗಿದ್ದು, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಈ ಕೆಳಕಂಡ ಕ್ರಮಬದ್ಧ ಆಸ್ತಿಗಳಿಗೆ ನಿಗಧಿತ ನಮೂನೆ 9 ಹಾಗೂ 11 ಎ ರಲ್ಲಿ ದಾಖಲಿಸಲು ದಿನಾಂಕ:15-06-2013 ರಿಂದ ರಾಜ್ಯದ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11 ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುತ್ತಿವೆ. ತದ ನಂತರ ಹೊರಡಿಸಿದ ಸುತ್ತೋಲೆಗಳನ್ನಾಧರಿಸಿ ಈ ಕೆಳಕಂಡ ವರ್ಗದ ಆಸ್ತಿಗಳಿಗೆ ನಮೂನೆ-9 ಮತ್ತು ನಮೂನೆ 11ಎ ನೀಡಲಾಗುತ್ತಿದೆ.

1. ಗ್ರಾಮ ಠಾಣಾ ಒಳಗಡೆ ಇರುವ ಆಸ್ತಿಗಳು- ತಹಶೀಲ್ದಾರರಿಂದ ಗ್ರಾಮ ಠಾಣಾದ ಕಚ್ಚಾ ನಕಾಶೆಯನ್ನು ಒದಗಿಸುವುದು.
2. ಗ್ರಾಮ ಠಾಣಾದ ಹೊರಗಡೆ ಇರುವ ಆಸ್ತಿಗಳು- ಸಕ್ಷಮ ಪ್ರಾಧಿಕಾರದಿಂದ ಕೃಷಿಯೇತರ ಉದ್ದೇಶಕ್ಕಾಗಿ ಹೊರಡಿಸಿರುವ ಆದೇಶದ ಪ್ರತಿ ಹಾಗೂ ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಲೇಔಟ್ ಪ್ಲಾನ್.
3. ಸರ್ಕಾರದ ವಸತಿ ಯೋಜನೆಗಳಾದ ಬಸವ ವಸತಿ, ಗ್ರಾಮೀಣ ಅಂಬೇಡ್ಕರ್ ಹಾಗೂ ಇಂದಿರಾ ಆವಸ್ ಯೋಜನೆಯಡಿ ಸೃಜಿಸಿರುವ ಆಸ್ತಿಗಳು.
4. ಸಿಂಗಲ್ ಸೈಟ್ ಲೇಔಟ್ ಪ್ಲಾನ್ ಅಪ್ರೂವಲ್.
5. ಕೈಗಾರಿಕಾ ಉದ್ದೇಶಕ್ಕೆ ಪರಿವರ್ತಿಸಿದ ಜಮೀನು
6. ಅಪಾರ್ಟ್‌ಮೆಂಟ್ ಯುನಿಟ್ (ಭೂ ಪರಿವರ್ತನೆ ಮತ್ತು ಲೇಔಟ್ ಅನುಮೋದನೆಯಾಗಿರುವುದು.)
7. ದಿನಾಂಕ:16-11-1992 ಪೂರ್ವದಲ್ಲಿ ಪಂಚಾಯತಿಗಳಿಂದ ಬಡಾವಣೆ ಎಂದು ಅನುಮೋದನೆಯಾಗಿರುವ ಆಸ್ತಿಗಳು.
8. ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಪ್ರಾಧಿಕಾರ / ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅನುಮೋದಿತ ವಾಣಿಜ್ಯ ನಿವೇಶನ
9. ದಿನಾಂಕ:11-11-2014 ರ ನಂತರ ಗ್ರಾಮ ಪಂಚಾಯತಿಗಳಿಂದ / ತಾಲ್ಲೂಕು ಪಂಚಾಯತಿಗಳಿಂದ ಅನುಮೋದನೆಯಾಗಿರುವ ಬಡಾವಣೆ ನಿವೇಶನ.
10. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ BDA, BMRDA, BIAAPA, KHB, KIADB, LDA's & LPA's ಅನುಮೋದಿಸಿದ ಬಡಾವಣೆಗಳಲ್ಲಿ ಬರುವ ಆಸ್ತಿಗಳು.

ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು)

(ಎರಡನೇ ತಿದ್ದುಪಡಿ) ನಿಯಮಗಳು, 2013 ರ ನಿಯಮ 30 ಕ್ಕೆ ದಿನಾಂಕ:21-01-2014 ರಂದು ತಿದ್ದುಪಡಿ ತರಲಾಗಿದ್ದು ಈ ಕೆಳಕಂಡಂತಿದೆ.

"ಸರ್ಕಾರಿ ಜಮೀನಿನಲ್ಲಿ, ಸ್ಥಳೀಯ ಸಂಸ್ಥೆಗಳ ಸ್ವತ್ತಿನಲ್ಲಿ, ಸರ್ಕಾರಿ ಸ್ವಾಮ್ಯದ ಶಾಸನಬದ್ಧ ನಿಕಾಯ ಅಥವಾ ಸಂಸ್ಥೆಗಳ ಸ್ವತ್ತಿನಲ್ಲಿ ಹೊರತುಪಡಿಸಿ, ಇನ್ನುಳಿದ ಖಾಲಿ ಜಮೀನುಗಳು, ಕಟ್ಟಡಗಳು, ಕಟ್ಟಡಗಳ ಮತ್ತು ಸ್ಥಳವನ್ನು ಒಳಗೊಂಡಂತೆ ಕಟ್ಟಡ ನಿಯಮಗಳನ್ನು ಉಲ್ಲಂಘಿಸಿ, ನಿರ್ಮಿತವಾಗಿರುವ ಕಟ್ಟಡಗಳಿಗೆ ಅಥವಾ ಅನಧಿಕೃತ ಬಡಾವಣೆಗಳ ಅಥವಾ ಕಂದಾಯ ಜಮೀನುಗಳ ಅಥವಾ ಕಟ್ಟಡಗಳು ಪೂರ್ಣಗೊಂಡಿರುವ ಬಗ್ಗೆ ದಾಖಲೆಗಳಿಲ್ಲದೆ ಅನುಭವಿಸುತ್ತಿರುವ ಕಟ್ಟಡಗಳು". ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಿಗಧಿತ ನಮೂನೆ 11ಬಿ ರಲ್ಲಿ ದಾಖಲಿಸಲು ದಿನಾಂಕ:03-02-2014 ರಿಂದ ರಾಜ್ಯದ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-11ಬಿ ಯನ್ನು **ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸುತ್ತಿವೆ.**

ನಮೂನೆ 11ಬಿ ಪಡೆಯಲು ಸಾರ್ವಜನಿಕರು 1) ಲಭ್ಯವಿದ್ದರೆ ಪರಿವರ್ತಿತ ಆದೇಶದ ಪ್ರತಿ 2) ಪಹಣಿ ಪತ್ರಿಕೆ, 3) ಫಾರಂ ಬಿಲ್ಡಿಂಗ್‌ಗಳನ್ನು ಗುರುತಿಸಲು ಸಂಬಂಧಿಸಿದ ತಹಶೀಲ್ದಾರ್ / ಕಂದಾಯ ಪರಿವೀಕ್ಷಕರ ಪ್ರಮಾಣ ಪತ್ರ 4) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 95(2) ರನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ತಹಶೀಲ್ದಾರ್‌ರವರು ನೀಡಿರುವ ಹಿಂಬರಹದ ಪ್ರತಿಯೊಂದಿಗೆ ಯಾವುದಾದರೂ ಒಂದು ದಾಖಲೆಯನ್ನು ನೀಡಬೇಕಾಗುತ್ತದೆ.

ಸರ್ಕಾರವು ಆಗಿಂದ್ದಾಗೆ ಹೊರಡಿಸುವ ನಿಯಮಗಳು, ಸುತ್ತೋಲೆಗಳು, ಪತ್ರಗಳಲ್ಲಿನ ನಿರ್ದೇಶನಗಳ ಅನುಸಾರ **ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-9, 11ಎ ಮತ್ತು 11ಬಿ** ಗಳನ್ನು ವಿತರಿಸಲು ಕ್ರಮ ಕೈಗೊಳ್ಳತಕ್ಕದ್ದು. ಇ-ಸ್ವತ್ತು ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳು, ಸುತ್ತೋಲೆಗಳು ಮತ್ತು ಪತ್ರಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ವೆಬ್‌ಸೈಟ್ ವಿಳಾಸ:rdpr.kar.nic.in ನಲ್ಲಿ ಅಳವಡಿಸಲಾಗುತ್ತಿದೆ.

ಆದ್ದರಿಂದ ಗ್ರಾಮ ಪಂಚಾಯತಿಗಳು ತಪ್ಪದೆ ತೆರಿಗೆ ನಿರ್ಧರಣೆ ಪಟ್ಟಿ ರಿಜಿಸ್ಟರ್ (ನಮೂನೆ-9, 11ಬಿ) ಭೂಮಿ ಮತ್ತು ಕಟ್ಟಡದ ತೆರಿಗೆಗಳ ಬೇಡಿಕೆ ಮತ್ತು ವಸೂಲಿ ರಿಜಿಸ್ಟರ್ (ನಮೂನೆ-11ಎ) ಗಳನ್ನು ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಿದೆ. ಸದರಿ ನಮೂನೆಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿಯ ಮೂಲಕ ಮಾತ್ರ **ವಿತರಿಸತಕ್ಕದ್ದು.**

**ಮೇಲ್ಕಂಡ** ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಮತ್ತೊಮ್ಮೆ ತಿಳಿಸಿದೆ.

25/2/16

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಅನುಬಂಧ - 2

# Sira Tq eSwathu Application Details(LCQ-950)

| G.P Name | Total Applications Received (01.04.2024 to 07.03.2025) | eSwathu Issued | | | Pending |
|---|---|---|---|---|---|
| | | FORM 11B | Form 9/11A | Total | |
| Bandalgunte | 54 | 18 | 33 | 53 | 1 |
| Changavara | 49 | 15 | 34 | 49 | |
| Karekurahalli | 133 | 50 | 82 | 132 | 1 |
| Talagunda | 82 | 22 | 60 | 82 | |
| Yalehadagi | 55 | 28 | 25 | 53 | 2 |
| BARAGUR | 142 | 42 | 100 | 142 | |
| BEVINAHALLI | 46 | 29 | 17 | 46 | |
| BIJJIPASANDRA | 63 | 8 | 55 | 63 | |
| BHUVANAHALLI | 237 | 19 | 215 | 234 | 3 |
| BUKKAPATNA | 166 | 23 | 142 | 165 | 1 |
| CHIKKANAHALLI | 87 | 29 | 55 | 84 | 3 |
| CHENNENAHALLI | 152 | 43 | 109 | 152 | |
| DODDA AGRAHARA | 165 | 89 | 76 | 165 | |
| DODDABANAGERE | 53 | 18 | 35 | 53 | |
| DWARANAKUNTE | 31 | 19 | 12 | 31 | |
| GOPALADEVARAHALLI | 35 | 9 | 26 | 35 | |
| GOWDAGERE | 45 | 20 | 25 | 45 | |
| Halenahalli | 52 | 11 | 41 | 52 | |
| HANDIKUNTE | 32 | 11 | 21 | 32 | |
| HENDORE | 72 | 23 | 48 | 71 | 1 |
| HONNAGONDANAHALLI | 81 | 40 | 41 | 81 | |
| HOSUR | 124 | 26 | 98 | 124 | |
| HULIKUNTE | 39 | 26 | 13 | 39 | |
| HUNISEHALLI | 142 | 39 | 103 | 142 | |
| HUYILDORE | 140 | 42 | 98 | 140 | |
| KALLAMBELLA | 93 | 31 | 62 | 93 | |
| KOTTA | 689 | 51 | 638 | 689 | |
| LAKSHMISAGARA | 120 | 23 | 94 | 117 | 3 |
| MADALUR | 40 | 10 | 30 | 40 | |
| MAGODU | 106 | 39 | 67 | 106 | |
| MELUKUNTE | 38 | 21 | 18 | 39 | |
| NADUR | 136 | 29 | 107 | 136 | |
| NEJALAGUDDA | 103 | 76 | 27 | 103 | |
| RAMALINGAPURA | 162 | 68 | 94 | 162 | |
| RATHNASANDRA | 128 | 82 | 46 | 128 | |
| SEEBI | 43 | 22 | 20 | 42 | 1 |
| SEEBIAGRAHARA | 173 | 15 | 157 | 172 | 1 |
| TADAKALUR | 183 | 143 | 40 | 183 | |
| [illegible] | 77 | 7 | 70 | 77 | |
| TAVAREKERE | 94 | 24 | 70 | 94 | |
| VADALADAKU (HOSAHALLI) | 61 | 29 | 32 | 61 | |
| YALIYUR | 106 | 27 | 79 | 106 | |
| **Total** | 4630 | 1396 | 3217 | 4613 | 17 |

Executive Officer
Taluk Panchayat Sira